# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 509 |
| ಸದಸ್ಯರ ಹೆಸರು | ಶ್ರೀ ಪಿ.ಹೆಚ್.ಪೂಜಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | 20.08.2026 |
| ಉತ್ತರಿಸಬೇಕಾದ ಸಚಿವರು | ಮಾನ್ಯ ಸಣ್ಣ ನೀರಾವರಿ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಕಲ್ಯಾಣ ಕರ್ನಾಟಕ ಭಾಗದ 41 ಕರ್ನಾಟಕ ಪಬ್ಲಿಕ್ ಶಾಲೆಗಳಲ್ಲಿ 41 ನೆಹರು ಸ್ಟ್ರೀಮ್ ಲ್ಯಾಬ್ ಸ್ಥಾಪಿಸುತ್ತಿರುವುದು ಸರಿಯಷ್ಟೇ; ಆದರೆ, ಕಲಿಕೆಯಲ್ಲಿ ಕಿತ್ತೂರು ಕರ್ನಾಟಕ ಜಿಲ್ಲೆಗಳು ಕೂಡ ಹಿಂದುಳಿದಿವೆ ಎಂಬ ಅಂಶ ಸರ್ಕಾರದ ಗಮನಕ್ಕೆ ಬಂದಿದೆಯೇ; | ಕಲ್ಯಾಣ ಕರ್ನಾಟಕ ಭಾಗದ 41 ಕರ್ನಾಟಕ ಪಬ್ಲಿಕ್ ಶಾಲೆಗಳಲ್ಲಿ 41 ನೆಹರು ಸ್ಟ್ರೀಮ್ ಲ್ಯಾಬ್ ಸ್ಥಾಪಿಸಲು ಉದ್ದೇಶಿಸಿ, ಅಗತ್ಯವಿರುವ ಅನುದಾನವನ್ನು ಒದಗಿಸುವಂತೆ ಇಲಾಖಾ ಕಾರ್ಯದರ್ಶಿರವರಿಂದ ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿಯ ಕಾರ್ಯದರ್ಶಿಯವರಿಗೆ ಪತ್ರ ಬರೆಯಲಾಗಿರುತ್ತದೆ.<br><br>ಅದರಂತೆ, ಅಪರ ಆಯುಕ್ತರು, ಶಾಲಾ ಶಿಕ್ಷಣ ಇಲಾಖೆ, ಕಲಬುರಗಿ ವಿಭಾಗ, ಕಲಬುರಗಿ ರವರು ದಿನಾಂಕ:03.02.2026 ಮತ್ತು 18.02.2026ರ ಪತ್ರಗಳಲ್ಲಿ ನೆಹರೂ ಸ್ಟ್ರೀಮ್ ಲ್ಯಾಬ್ ಅನುಷ್ಠಾನಗೊಳಿಸಲು ಕೆಲವು ಅಗತ್ಯ ಮಾಹಿತಿ ಮತ್ತು ಸ್ಪಷ್ಟೀಕರಣವನ್ನು ಒದಗಿಸುವಂತೆ ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆಯನ್ನು ಕೋರಿರುತ್ತಾರೆ.<br><br>ಈ ಸಂಬಂಧ, ಸದರಿ ಪತ್ರಗಳಿಗೆ ಅಗತ್ಯ ಮಾಹಿತಿ ಮತ್ತು ಸ್ಪಷ್ಟೀಕರಣವನ್ನು ದಿನಾಂಕ:09.02.2026 ಮತ್ತು 25.02.2026ರ ಪತ್ರಗಳ ಮೂಲಕ ಅಪರ ಆಯುಕ್ತರು, ಶಾಲಾ ಶಿಕ್ಷಣ ಇಲಾಖೆ ಕಲಬುರಗಿ ಇವರಿಗೆ ಸಲ್ಲಿಸಲಾಗಿರುತ್ತದೆ.<br><br>ಮುಂದುವರಿದು, ಸದರಿಯವರಿಂದ ಪ್ರಸ್ತುತದವರೆಗೆ ನೆಹರು ಸ್ಟ್ರೀಮ್ ಲ್ಯಾಬ್ ಸ್ಥಾಪನೆಗೆ ಅನುದಾನ ಒದಗಿಸುವ ಬಗ್ಗೆ ಯಾವುದೇ ಮಾಹಿತಿಯು ಇಲಾಖೆಗೆ ಸ್ವೀಕೃತವಾಗಿರುವುದಿಲ್ಲ.<br><br>ಮೊದಲು ಕಲ್ಯಾಣ ಕರ್ನಾಟಕ ಭಾಗದಲ್ಲಿ (ಪ್ರದೇಶ) ನೆಹರು ಸ್ಟ್ರೀಮ್ ಲ್ಯಾಬ್ ಸ್ಥಾಪನೆಯ ಪ್ರಕ್ರಿಯೆಯನ್ನು ಪೂರ್ಣಗೊಳಿಸಲಾಗುವುದು. ನಂತರ, ಅನುದಾನದ ಲಭ್ಯತೆಯ ಆಧಾರದ ಮೇಲೆ ನೆಹರು ಸ್ಟ್ರೀಮ್ ಲ್ಯಾಬ್ ಸ್ಥಾಪನೆ ಮುಂದುವರಿಸುವ ಬಗ್ಗೆ ಪರಿಗಣಿಸಲಾಗುವುದು. |
| ಆ) | ಹಾಗಿದ್ದಲ್ಲಿ, ನೆಹರೂ ಸ್ಟ್ರೀಮ್ ಲ್ಯಾಬ್‌ಗಳನ್ನು ಕಿತ್ತೂರು ಕರ್ನಾಟಕದ ಎಲ್ಲಾ ಜಿಲ್ಲೆಗಳಲ್ಲೂ ಪ್ರಾರಂಭಿಸಲು ಸರ್ಕಾರ ಕ್ರಮ ಕೈಗೊಳ್ಳಲಾಗುವುದೇ? | ಅನುದಾನದ ಲಭ್ಯತೆಯ ಆಧಾರದ ಮೇಲೆ ನೆಹರೂ ಸ್ಟ್ರೀಮ್ ಲ್ಯಾಬ್‌ಗಳನ್ನು ಕಿತ್ತೂರು ಕರ್ನಾಟಕದ ಎಲ್ಲಾ ಜಿಲ್ಲೆಗಳಲ್ಲೂ, ಪ್ರಾರಂಭಿಸುವ ಬಗ್ಗೆ ಪರಿಶೀಲಿಸಲಾಗುವುದು. |

ಸಂಖ್ಯೆ: ಐಟಿಬಿಟಿ 213 ಎಸ್‌ಟಿಎಸ್ 2026

(ಡಾ. ಅಜಯ್ ಸಿಂಗ್)
ಮಾನ್ಯ ಸಣ್ಣ ನೀರಾವರಿ ಹಾಗೂ ವಿಜ್ಞಾನ
ಮತ್ತು ತಂತ್ರಜ್ಞಾನ ಸಚಿವರು